ರಸ್ತೆಯು ಪ್ರಸ್ತಾಪಿಸಲಾದ ಸೇತುವೆಯ ಮೂಲಕ ಸೋಲಾಪುರ ಚಿತ್ರದುರ್ಗ ರಾಷ್ಟ್ರೀಯ ಹೆದ್ದಾರಿ 13ನ್ನು ಸೇರುತ್ತದೆ. ಸದರಿ ರಾಜ್ಯ ಹೆದ್ದಾರಿ 45ನ್ನು ಹಂತ ಹಂತವಾಗಿ ಅನುದಾನದ ಲಭ್ಯತೆಗನುಗುಣವಾಗಿ ಅಭಿವೃದ್ಧಿಪಡಿಸಲಾಗುವುದು.

ಇ) ಅನುದಾನದ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಈ ರಸ್ತೆಯ ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗುವುದು.

599(794) : ಶ್ರೀ ಪಾಟೀಲ್ ಡಿ.ಆರ್. (ಗದಗ್) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೃಷ್ಣಾ ನದಿ ಕಣಿವೆಯಲ್ಲಿ ಬಚಾವತ್ ಐತೀರ್ಪಿನಂತೆ ಹಂಚಿಕೆಯಾದ ರಾಜ್ಯದ ಪಾಲಿನ ನೀರಿನ ಬಳಕೆಗೆ ವ್ಯವಸ್ಥೆ ಆಗಿದೆಯೇ;

ಆ) ಕೃಷ್ಣಾ ಕಣಿವೆಯಲ್ಲಿ ಬಹು ಕಾಲದಿಂದ ಪೂರ್ಣಗೊಳ್ಳದಿರುವ ಯೋಜನೆಗಳನ್ನು ಸರ್ಕಾರ 2005ರ ಅಂತ್ಯದ ವೇಳೆಗೆ ಪೂರ್ಣಗೊಳಿಸುವುದೇ;

ಇ) ಪೂರ್ಣಗೊಳಿಸುವುದಾದರೆ ಅದಕ್ಕೆ ಹಣಕಾಸು ವ್ಯವಸ್ಥೆ ಮಾಡಲಾಗಿದೆಯೇ;

ಈ) ಕೇಂದ್ರ ಸರ್ಕಾರ ನೇಮಕ ಮಾಡಿರುವ ಕೃಷ್ಣಾ ನದಿ ಕಣಿವೆಯಲ್ಲಿ ಹೆಚ್ಚುವರಿ ನೀರಿನ ಹಂಚಿಕೆ ಕುರಿತು ಆಯೋಗಕ್ಕೆ ನೀಡಲಾಗಿರುವ ಪರ್ಯಾಲೋಚಿಸಬೇಕಾದ ವಿಷಯಗಳಲ್ಲಿ ರಾಜ್ಯದ ಹಿತಕ್ಕೆ ಧಕ್ಕೆಯನ್ನುಂಟು ಮಾಡುವ ಅಂಶಗಳಿವೆಯೇ;

ಉ) ಇದ್ದಲ್ಲಿ, ಇದನ್ನು ಬದಲಾಯಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಬಳಸಿಕೊಳ್ಳಲು ವ್ಯವಸ್ಥೆ ಮಾಡಲಾಗುತ್ತಿದೆ.

ಆ) 29 ಯೋಜನೆಗಳು ಈಗಾಗಲೇ ಪೂರ್ಣಗೊಂಡಿವೆ, ಇನ್ನು 12 ಯೋಜನೆಗಳನ್ನು 2005ರ ವೇಳೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಉಳಿದ 20 ಯೋಜನೆಗಳನ್ನು 2007ರ ನಂತರ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಇ) ನಿಗಮಗಳ ವತಿಯಿಂದ ಹಾಗೂ ಎ.ಐ.ಬಿ.ಪಿ. ರಡಿಯಲ್ಲಿ ಕೇಂದ್ರ ಸರ್ಕಾರದ ಧನ ಸಹಾಯದ ಮೂಲಕ ಹಣಕಾಸು ಒದಗಿಸಿಕೊಳ್ಳಲು ವ್ಯವಸ್ಥೆ ಮಾಡಲಾಗುತ್ತಿದೆ.

ಈ) ದಿನಾಂಕ 24/2004ರ ಕೇಂದ್ರ ಸರ್ಕಾರದ ಅಧಿಸೂಚನೆಯಂತೆ ಕೃಷ್ಣಾ ಜಲ ವಿವಾದ ಮಂಡಳಿ ರಚನೆಯಾಗಿದ್ದು, ಈ ಮಂಡಳಿಯು ಪರಿಯಾಲೋಚಿಸಬೇಕಾಗಿರುವ ವಿಷಯಗಳನ್ನು ಕೇಂದ್ರ ಸರ್ಕಾರವು ನ್ಯಾಯಾಧಿಕರಣಕ್ಕೆ ಸಲ್ಲಿಸಿರುವ ಬಗ್ಗೆ ಮಾಹಿತಿ ಇರುವುದಿಲ್ಲ.

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

600(782) : ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆಯ ಹುಲಿಗುಡ್ಡ ಏತ ನೀರಾವರಿ ಯೋಜನೆಗೆ ಈಗಾಗಲೇ ಖರ್ಚಾದ ಹಣವೆಷ್ಟು;